ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

22

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ　　ದಿನಾಂಕ : DATE : 10/4/24

# 18 ವರ್ಷ ಮೇಲ್ಪಟ್ಟವರು ಧರ್ಮ ಆಯ್ಕೆಗೆ ಸ್ವತಂತ್ರರು: ಸುಪ್ರೀಂ ಕೋರ್ಟ್

ಕ.ಪ್ರ 10.4.24



ನವದೆಹಲಿ: ಮಾಟ- ಮಂತ್ರ ಹಾಗೂ ಧಾರ್ಮಿಕ ಮತಾಂತರ ನಿಯಂತ್ರಿಸುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಬೇಕು ಎಂದು ಕೋರಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ವಿಚಾರಣೆಗೆ ಅಂಗೀಕರಿಸಲು ಸುಪ್ರೀಂಕೋರ್ಟ್ ನಿರಾಕರಿಸಿದೆ.

ಇದೇ ವೇಳೆ, 18 ವರ್ಷ ಮೇಲ್ಪಟ್ಟ ವ್ಯಕ್ತಿಗಳು ತಮ್ಮ ಧರ್ಮವನ್ನು ಆರಿಸಿಕೊಳ್ಳುವ ಮುಕ್ತ ಸ್ವಾತಂತ್ರ್ಯ ಹೊಂದಿದ್ದಾರೆ ಎಂದು ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ. 'ಧಾರ್ಮಿಕ ಮತಾಂತರ ಎಂಬುದು ಜಾತ್ಯತೀತತೆಗೆ ವಿರುದ್ಧ. ಹೀಗಾಗಿ ಇದರ ವಿರುದ್ಧ ಕಾಯ್ದೆ ರೂಪಿಸುವ ಸಾಧ್ಯಾಸಾಧ್ಯತೆ ಕುರಿತು ಸರ್ಕಾರಕ್ಕೆ ಸೂಚಿಸಬೇಕು. ಇದೇ ವೇಳೆ ಮಾಟ-ಮಂತ್ರ, ಮೂಢನಂಬಿಕೆ ವಿರುದ್ಧ ಕಾಯ್ದೆ ರೂಪಿಸಿ ಕನಿಷ್ಠ 3 ಹಾಗೂ ಗರಿಷ್ಠ 10 ವರ್ಷ ಜೈಲು ಶಿಕ್ಷೆ ಹಾಗೂ ಭಾರಿ ದಂಡ ವಿಧಿಸುವಂತೆ ನಿರ್ದೇಶನ ನೀಡಬೇಕು' ಎಂದು ವಕೀಲ ಅಶ್ವಿನಿ ಉಪಾಧ್ಯಾಯ ಅವರು ಅರ್ಜಿ ಸಲ್ಲಿಸಿದ್ದರು. ಅರ್ಜಿಯಲ್ಲಿನ ಅಂಶಗಳನ್ನು ತಿಳಿದು ಆಕ್ರೋಶಗೊಂಡ ನ್ಯಾಯಪೀಠ, 'ಇದೆಂತಹ ರಿಟ್ ಅರ್ಜಿ? ಭಾರಿ ದಂಡ ಹೇರಬೇಕಾಗುತ್ತದೆ. 18 ವರ್ಷ ಮೇಲ್ಪಟ್ಟವರು ತಮ್ಮ ಧರ್ಮ ಆಯ್ಕೆ ಮಾಡಿಕೊಳ್ಳಬಾರದು ಎಂಬುದಕ್ಕೆ ಯಾವ ಕಾರಣವೂ ಇಲ್ಲ' ಎಂದು ಚಾಟಿ ಬೀಸಿತು.